# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 216 |
| ಸದಸ್ಯರ ಹೆಸರು | : | ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶಿತ ಹೊಂದಿದವರು) |
| ಉತ್ತರಿಸುವ ದಿನಾಂಕ | : | 06.12.2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲ್ಲೂಕಿನ ಹಳ್ಳಿಗಳಿಗೆ ಸಂಪರ್ಕಿಸುವ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಳಗಾವಿ ಜಿಲ್ಲೆಯ ಖಾನಾಪೂರ ತಾಲ್ಲೂಕಿನ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳ ಆಯ್ದ ಭಾಗಗಳಲ್ಲಿ ಭಾಗಶಃ ಹಾನಿಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಬೆಳಗಾವಿಯಿಂದ ಚೋರ್ಲಾಘಾಟ್ ಮುಖಾಂತರ ಗೋವಾಕ್ಕೆ ಹೋಗುವ ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಳಗಾವಿಯಿಂದ ಚೋರ್ಲಾಘಾಟ್ ಮುಖಾಂತರ ಗೋವಾಕ್ಕೆ ಹೋಗುವ ರಸ್ತೆಯು ರಾಷ್ಟ್ರೀಯ ಹೆದ್ದಾರಿ-748AAರ ಎಂದು ದಿನಾಂಕ: 05.12.2017 ರಲ್ಲಿ ಕೇಂದ್ರ ಭೂಸಾರಿಗೆ ಮಂತ್ರಾಲಯವು ಘೋಷಿಸಿ, ಸದರಿ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ಸುಪರ್ದಿಗೆ ನೀಡಿರುತ್ತಾರೆ. ಸದರಿಯವರಿಂದ ಪಡೆದ ವರದಿಯಂತೆ ರಾಷ್ಟ್ರೀಯ ಹೆದ್ದಾರಿ-748AAರನ್ನು ಕಿ.ಮೀ. 26.13 ರಿಂದ 69.48 ರವರೆಗೆ (ಚೋರ್ಲಾಘಾಟ್ ಮೂಲಕ ಬೆಳಗಾವಿಯಿಂದ ಸ್ಯಾಂಕ್‌ವೇಲಿಯಂಗೆ) ಅಗಲೀಕರಣ ಕಾಮಗಾರಿಯನ್ನು ಕೈಗೊಂಡಿದ್ದು, ಅರಣ್ಯ ಮತ್ತು ವನ್ಯ ಜೀವಿ ಇಲಾಖೆಯವರಿಂದ ಒಪ್ಪಿಗೆ ದೊರೆಯದ ಕಾರಣ ಕಾಮಗಾರಿಯ ಗುತ್ತಿಗೆಯನ್ನು ಮುಕ್ತಾಯಗೊಳಿಸಲಾಗಿರುತ್ತದೆ. ಹಾಗೂ ಹಾಳಾದ ರಸ್ತೆಯನ್ನು ಸುಸ್ಥಿತಿಯಲ್ಲಿಡಲು ಭಾರತೀಯ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದವರು ದಿನಾಂಕ: 06.09.2023ರಂದು ನಡೆಸಿದ ಸಭೆಯಲ್ಲಿ ಠೇವಣಿ ವಂತಿಗೆಯಡಿಯಲ್ಲಿ ರಾಜ್ಯ ಲೋಕೋಪಯೋಗಿ ಇಲಾಖೆಯ ಮೂಲಕ ಕಾಮಗಾರಿಯನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ. ರಾಷ್ಟ್ರೀಯ ಹೆದ್ದಾರಿ ವಲಯದ ಮೂಲಕ ಸಲ್ಲಿಸಲಾಗಿದ್ದ, ಅಂದಾಜು ಪಟ್ಟಿಯನ್ನು ರೂ.58.641 ಕೋಟಿಗಳ ಮೊತ್ತಕ್ಕೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕೇಂದ್ರ ಕಛೇರಿಗೆ ಅನುಮೋದನೆಗಾಗಿ ಕಳುಹಿಸಿರುತ್ತಾರೆ. ಅನುಮೋದನೆ ಸ್ವೀಕೃತವಾದ ನಂತರ ಕಾಮಗಾರಿಯನ್ನು ರಾಷ್ಟ್ರೀಯ ಹೆದ್ದಾರಿ ವಲಯದ ಮೂಲಕ ಕೈಗೊಳ್ಳಲಾಗುವುದು. |
| ಇ) | ಖಾನಾಪೂರ ತಾಲ್ಲೂಕಿನ ಇನ್ನಿತರ ಹಳ್ಳಿಗಳು, ಕಾಡುಗಳಲ್ಲಿರುವ | ಖಾನಾಪೂರ ತಾಲ್ಲೂಕಿನ ಇನ್ನಿತರ ಹಳ್ಳಿಗಳು, ಕಾಡುಗಳಲ್ಲಿರುವ ಹಳ್ಳಿಗಳಲ್ಲಿ ಹಾನಿಯಾಗಿರುವ ರಸ್ತೆಗಳನ್ನು 2023-24ನೇ ಸಾಲಿನಲ್ಲಿ |

| | ಪ್ರಶ್ನೆಗಳು | ಉತ್ತರಗಳು |
|---|---|---|
| | ಹಳ್ಳಿಗಳ್ಲಲ್ಲಿನ ರಸ್ತೆಗಳು ತುಂಬಾ ಹದಗೆಟ್ಟಿರುವುದರಿಂದ ದುರಸ್ತಿಯನ್ನು ಯಾವಾಗ ಕೈಗೊಳ್ಳಲಾಗುವುದು; | ರಾಜ್ಯ ಹೆದ್ದಾರಿ ನಿರ್ವಹಣೆ ಅಡಿಯಲ್ಲಿ ರೂ.138.03 ಲಕ್ಷಗಳ ಅಂದಾಜು ಮೊತ್ತದಲ್ಲಿ 153.40 ಕಿ.ಮೀ. ಉದ್ದದ ರಾಜ್ಯ ಹೆದ್ದಾರಿಗಳನ್ನು ಹಾಗೂ ರೂ.103.21 ಲಕ್ಷಗಳ ಅಂದಾಜು ಮೊತ್ತದಲ್ಲಿ 161.82 ಕಿ.ಮೀ. ಉದ್ದದ ಜಿಲ್ಲಾ ಮುಖ್ಯ ರಸ್ತೆಗಳ ನಿರ್ವಹಣೆ ಕಾಮಗಾರಿಗಳಿಗೆ ಟೆಂಡರ್‌ಗಳನ್ನು ಕರೆದು ನಿರ್ವಹಣೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ಸದರಿ ಕಾಮಗಾರಿಗಳು ಪ್ರಗತಿಯಲ್ಲಿವೆ. |
| ಈ) | ಖಾನಾಪೂರದಿಂದ ನಂದಗಡ ಮುಖಾಂತರ ಹೋಗುವ ಹಳಿಯಾಳ ರಸ್ತೆ ಸಹ ಸಂಪೂರ್ಣವಾಗಿ ಹಾಳಾಗಿರುವುದರಿಂದ . ಸದರಿ ರಸ್ತೆಯನ್ನು ದುರಸ್ತಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಖಾನಾಪೂರದಿಂದ ನಂದಗಡ ಮುಖಾಂತರ ಹೋಗುವ ಹಳಿಯಾಳ ರಸ್ತೆಯು (ರಾ.ಹೆ-93) ಒಟ್ಟು 34.58 ಕಿ.ಮೀ ಉದ್ದ ಇದ್ದು, ಸದರಿ ರಸ್ತೆಯ ಆಯ್ದ ಭಾಗಗಳಲ್ಲಿ ಹಾನಿಯಾಗಿದ್ದು, ಹಾನಿಯಾಗಿರುವ ರಸ್ತೆಯನ್ನು 2023-24ನೇ ಸಾಲಿನ ರಾಜ್ಯ ಹೆದ್ದಾರಿ ವಾರ್ಷಿಕ ನಿರ್ವಹಣೆ ಅಡಿ ಬಿಡುಗಡೆಯಾದ ಅನುದಾನ ರೂ.21.45 ಲಕ್ಷಗಳಲ್ಲಿ 22.285 ಕಿ.ಮೀ. ರಸ್ತೆ ನಿರ್ವಹಣೆಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br>ಬಾಕಿ ಉಳಿದ ಒಟ್ಟು 12.295 ಕಿ.ಮೀ ಉದ್ದದ ರಸ್ತೆಯ ಭಾಗವು ಸುಸಿಸ್ಥಿಯಲ್ಲಿದೆ. |

ಲೋಇ 46 ಸಿಕ್ಯೂಎನ್ 2023(ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು